# ಪ್ರಧಾನ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಮಾಗಡಿ

## ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 152 /2021

**ಚಾಸಾ ಃ- 05 / ಪ್ರಾಸಾ ಃ- 05**

| | |
|---|---|
| ಹೆಸರು | ಶಾಂತರಾಜು ಎಸ್ |
| ತಂದೆ ಹೆಸರು | ಶಿವಣ್ಣ |
| ವಯಸ್ಸು | 40 |
| ಉದ್ಯೋಗ | ಸಿಹೆಚ್ ಸಿ 149 , ರಾಜ್ಯ ಗುಪ್ತ , ಬೆಂಗಳೂರು |
| ವಿಳಾಸ | ರಾಮೇಶ್ವರ ಬಡಾವಣೆ , ಮಾಗಡಿ ಟೌನ್ |

**ದಿನಾಂಕಃ 26.02.2026 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

2019 ರಿಂದ 2021 ರ ವರೆಗೆ ಮಾಗಡಿ ಪೋಲಿಸ್ ಠಾಣೆಯಲ್ಲಿ ಮುಖ್ಯ ಪೇದೆ ಎಂದು ಕೆಲಸ ನಿರ್ವಹಿಸಿದ್ದೇನೆ.

ದಿನಾಂಕ 12.02.2020 ರಂದು ಸಂಜೆ 4.00 ಗಂಟೆಗೆ ಚಾಸಾ 1 ಮತ್ತು ಚಾಸಾ4 ರವರು ಸರ್ಕಾರಿ ವಹನದಲ್ಲಿ ಆರೋಪಿ ಮತ್ತು ಮುದ್ದೆಮಾಲುಗಳನ್ನು ಠಾಣೆಗೆ ತಂದು ಹಾಜರು ಪಡಿಸಿ ವರಧಿ ನೀಡಿರುತ್ತಾರೆ. ಸದರಿ ವರಧಿ ಆಧಾರದ ಮೇಲೆ ಠಾಣಾ ಮೊಕದ್ದಮೆ ನಂ .250/2020 ರಂತೆ ಕಲಂ 32 , 34 ಕರ್ನಾಟಕ ಅಬಕಾರಿ ಕಾಯ್ದೆ ಅಡಿ ಪ್ರಥಮ ವರ್ತಮಾನ ವರಧಿಯನ್ನು ದಾಖಲಿಸಿಕೊಂಡಿರುತ್ತೇನೆ. ಪ್ರಥಮ ವರ್ತಮಾನ ವರಧಿಯನ್ನು ಮಾನ್ಯ ನ್ಯಾಯಾಲಯಕ್ಕೆ ಪಿಸಿ 111 ಲೋಹಿತ್ ಕುಮಾರ್ ರವರ ಮುಖಾಂತರ ಕಳುಹಿಸಿಕೊಟ್ಟಿರುತ್ತೇನೆ ಹಾಗೂ ಇನ್ನೊಂದು ಪ್ರತಿಯನ್ನು ನಮ್ಮ ಮೇಲಾಧಿಕಾರಿಗಳಿಗೆ ಮೆಲ್ ಮುಖಾಂತರ ಕಳುಹಿಸಿರುತ್ತೇನೆ.

ಈಗ ಸಾಕ್ಷಿಗೆ ನಿಪಿ-04 ಅನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ಪ್ರಥಮ ವರ್ತಮಾನ ವರಧಿಯನ್ನು ತೋರಿಸಲಾಗಿ

ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪ್ರಥಮ ವರ್ತಮಾನ ವರಧಿಯನ್ನು ನಿಪಿ-7 ಎಂದು ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು. ಸದರಿ ನಿವೇದನೆಯೊಂದಿಗೆ ಚಾಸಾ 1 ರವರು ಪಂಚರ ಸಮಕ್ಷಮ ಜರುಗಿಸಿದ ಮಹಜರನ್ನು ನೀಡಿರುತ್ತಾರೆ. ಈಗ ಸಾಕ್ಷಿಗೆ ನಿಪಿ-01 ಅನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಾಕ್ಷಿಯ ಸಹಿಯನ್ನು ನಿಪಿ-1(ಇ) ಎಂದು ಗುರುತಿಸಲಾಯಿತು. ಪ್ಲಾಸ್ಟಿಕ್ ಚೀಲದಲ್ಲಿ 90 ಎಂ ಎಲ್ ನ 75 ಹೈವಾರ್ಡ್ಸ್ ಪಂಚ್ ವಿಸ್ಕಿಯ ಟೆಟ್ರ ಪ್ಯಾಕುಗಳನ್ನು ಹಾಗೂ 90 ಎಂ ಎಲ್ ನ 35 ಬ್ಯಾಗ್ಪೇಪರ್ ಟೆಟ್ರಾ ಪ್ಯಾಕ್ ಹಾಗು 180 ಎಂ ಎಲ್ ನ 15 ಬ್ಯಾಗ್ ಪೇಪರ್ ಟೆಟ್ರಾ ಪ್ಯಾಕುಗಳನ್ನು ಸಹ ಹಾಜರು ಪಡಿಸಿರುತ್ತಾರೆ. ನಂತರ ಸದರಿ ಮುದ್ದೆಮಾಲುಗಳನ್ನು ನಾನು ಠಾಣಾ ಪಿಫ್ ನಂ.236/2020 ರಂತೆ ನಮೂದಿಸಿಕೊಂಡಿರುತ್ತೇನೆ.

ನಂತರ ದಸ್ತಗಿರಿ ಕಾನೂನು ಕ್ರಮಗಳನ್ನು ಅನುಸರಿಸಿ ಆರೋಪಿಯನ್ನು ಮಾನ್ಯ ನ್ಯಾಯಾಲಯದ ಮುಂದೆ ಹಾಜರು ಪಡಿಸಿರುತ್ತೇವೆ. ಚಾಸಾ2 ರಿಂದ 4 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ನಂತರ ಪ್ರಕರಣದ ತನಿಖೆ ಮುಕ್ತಾಯಗೊಂಡಿದ್ದರಿಂದ ಮಾನ್ಯ ನ್ಯಾಯಾಲಯಕ್ಕೆ ಆರೋಪಿಯ ವಿರುದ್ದ ಅಂತಿಮ ವರಧಿಯನ್ನು ಸಲ್ಲಿಸಿರುತ್ತೇವೆ. ಸದರಿ ಮುದ್ದೆಮಾಲು ಹಾಗೂ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಈಗ ಸಾಕ್ಷಿಗೆ ಮುದ್ದೆಮಾಲು 1 ರಿಂದ 4 ಅನ್ನು ಹಾಗೂ ಆರೋಪಿಯನ್ನು ತೋರಿಸಲಾಗಿ ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು** ಃ- **ಶ್ರೀ. ಸಿ ಕೆ ಆರ್** ವಕೀಲರಿಂದ **ಆರೋಪಿ** ಪರವಾಗಿ ಃ-

ಮೊದಲಾರಯ್ಯನ ಪಾಳ್ಯದ ಗ್ರಾವದವರು ರಾಮಕೃಷ್ಣಯ್ಯರವರು ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾರೆ ಎಂದು ನಿಮಗೆ ದೂರು ಏನಾದರೂ ಕೊಟ್ಟಿದ್ದರ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಜಪ್ತಿ ಪಡಿಸಿಕೊಂಡ ಮುದ್ದೆಮಾಲುಗಳು ರಮ್ಮಾ , ಬ್ರಾಂಡಿಯಾ ಅಥವಾ ಜಿಮ್ಮಾ ಅಥವಾ ವಿಸ್ಕಿನಾ ಎಂದರೆ ಸಾಕ್ಷಿ ಮಾಹಿತಿ ಇರುವುದಿಲ್ಲ ಎಂದು ನುಡಿಯುತ್ತಾರೆ. ನಿಮ್ಮ ಪಿಎಫ್ ನಲ್ಲೂ ಸಹ ಅದನ್ನು ನಮೂದು

ಮಾಡಿರುವುದಿಲ್ಲ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಮ್ಯಾಕ್ ಡೋನಾಲ್ಡ್ ಎಂಬ ಮದ್ಯವನ್ನು ಜಪ್ತಿ ಪಡಿಸಿಕೊಂಡಿರುತ್ತಾರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಸದರಿ ಜಪ್ತಿ ಪಡಿಸಿಕೊಂಡ ಮುದ್ದೆಮಾಲುಗಳನ್ನು ಯಾರ ಅಂಗಡಿಯಿಂದ ತಂದಿರುತ್ತೀರಿ ಎಂದು ತನಿಖೆ ಮಾಡಿರುತ್ತೀರಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಸದರಿ ಮುದ್ದೆಮಾಲುಗಳ ಉತ್ಪಾದನೆ ದಿನಾಂಕ ಮತ್ತು ಕೊನೆಯ ದಿನಾಂಕ ನಮೂದು ಮಾಡಿರುತ್ತೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಮೊದಲಾರಯ್ಯನಪಾಳ್ಯದ ಗ್ರಾಮದವರ ವಿಚಾರಣೆ ಮಾಡಿ ಹೇಳಿಕೆ ಪಡೆದಿರುತ್ತೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಆರೋಪಿಯ ಅಂಗಡಿ ಇರುವುದರ ಬಗ್ಗೆ ದಾಖಲಾತಿಗಳನ್ನು ಪಡೆದುಕೊಂಡಿರುತ್ತೀರಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಚಾಸಾ 1 ರವರು ನಿಮ್ಮ ಮೇಲಾಧಿಕಾರಿಗಳು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಆರೋಪಿಯು ಯಾವುದೇ ತಪ್ಪನ್ನು ಮಾಡದೇ ಇದ್ದರೂ ಚಾಸಾ 1 ರವರು ನಿಮ್ಮ ಮೇಲಾಧಿಕಾರಿಗಳು ಎಂಬ ಕಾರಣ ಆರೋಪಿಯ ವಿರುದ್ದ ಸುಳ್ಳು ದೂರನ್ನು ದಾಖಲಿಸಿಕೊಂಡಿರುತ್ತೀರಿ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ. ನಿಮಗೆ ಯಾವುದೇ ಸಾಕ್ಷಿದಾರರು ಹೇಳಿಕೆ ಕೊಟ್ಟಿರುವುದಿಲ್ಲ ಸುಳ್ಳು ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಹೇಳುತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ಆರೋಪಿಯ ಯಾವುದೇ ತಪ್ಪು ಇರದೇ ಇದ್ದರೂ ನಿಮ್ಮ ಠಾಣೆಯ ಅಂಕಿ ಅಂಶಕ್ಕೋಸ್ಕರ ಸುಳ್ಳು ದೂರನ್ನು ದಾಖಲಿಸಿಕೊಂಡು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಪ್ರ. ನ್ಯಾ. ದಂ. ಮತ್ತು ಜೆ. ಎಂ. ಎಫ್. ಸಿ. ಮಾಗಡಿ.**